ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು: ಪ್ರಸ್ತಾವ ಏನೆಂದರೆ:– "ಖಂಡ 2 ಮತ್ತು 3 ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ(ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ "ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡ 2006ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡ 2006ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಅಂಗೀಕರಿಸುವುದು"

18. ಶಾಸನ ರಚನೆ :

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಅ) ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ಎರಡನೇ ತಿದ್ದುಪಡಿ) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2005ನೇ ಸಾಲಿನ

ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ".

ಪ್ರಸ್ತಾವ ಮಂಡಿಸಲ್ಪಟ್ಟಿತು

ಶ್ರೀ ಜಗದೀಶ್ ಶೆಟ್ಟರ್: ಸನ್ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2005ನೇ ಸಾಲಿನ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ಎರಡನೇ ತಿದ್ದುಪಡಿ) ವಿಧೇಯಕದಲ್ಲಿ ಸರ್ಕಾರದ ಷೇರು ಹಣವಿರುವ ಕೋ-ಆಪರೇಟಿವ್ ಸೊಸೈಟಿಗಳು ಮತ್ತು ಫೆಡರೇಶನ್‌ಗಳೇನಿರುತ್ತವೆ, ಅಂತಹವುಗಳನ್ನು ಈ ಕಾನೂನಿನಡಿ include ಮಾಡಬೇಕೆಂದು ತಿದ್ದುಪಡಿ ತರಲಾಗಿದೆ. ಸರ್ಕಾರದ ಹಣವಿರುವ ಕೋ-ಆಪರೇಟಿವ್ ಸೊಸೈಟಿಗಳು ಮತ್ತು ಫೆಡರೇಶನ್‌ಗಳನ್ನು ಕಾನೂನಿನಡಿ include ಮಾಡುವ ಬಗ್ಗೆ ವಿಧೇಯಕವು ವಿಧಾನ ಪರಿಷತ್ತಿನಿಂದ ಅನುಮೋದನೆ ಪಡೆದುಕೊಂಡು ಬಂದಿರುತ್ತದೆ. ಅದನ್ನು ಮತ್ತೆ ಈ ಸದನವು ಒಪ್ಪಿಕೊಳ್ಳಬೇಕೆಂದು ವಿನಂತಿಸಿಕೊಳ್ಳುತ್ತಿದ್ದೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2005ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಪ್ರಸ್ತಾವ ಏನೆಂದರೇ:-

ಅಧ್ಯಕ್ಷರು: 'ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ'.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಅನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಯನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಜಗದೀಶ್ ಶೆಟ್ಟರ್(ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2005ನೇ ಸಾಲಿನ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2005ನೇ ಸಾಲಿನ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಆ) ಮಧ್ಯಮಾವಧಿ ವಿತ್ತೀಯ ಯೋಜನೆ ಹಾಗೂ 2006–07ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆ ವಾರ್ಷಿಕ ಯೋಜನಾ ವೆಚ್ಚ (ಪರಿಷ್ಕೃತ)

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "ಮಧ್ಯಮಾವಧಿ ವಿತ್ತೀಯ ಯೋಜನೆ ಹಾಗೂ 2006–07ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆ ವಾರ್ಷಿಕ ಯೋಜನಾ ವೆಚ್ಚ (ಪರಿಷ್ಕೃತ)ವನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ".

19. ಚುಕ್ಕೆ ಗುರುತಿನ ಗುರುತಿಲ್ಲದ ಹಾಗೂ ತಡೆಹಿಡಿಯಲ್ಪಟ್ಟ ಪ್ರಶ್ನೆ ಹಾಗೂ ಉತ್ತರಗಳು :

ಅಧ್ಯಕ್ಷರು: ದಿನಾಂಕ 14ನೇ ಜುಲೈ 2006ರಂದು 23ನೇ ಪಟ್ಟಿಯಲ್ಲಿರುವ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ 13 ಉತ್ತರಗಳನ್ನು ಹಾಗೂ ತಡೆಹಿಡಿಯಲ್ಪಟ್ಟ ಎರಡು ಪ್ರಶ್ನೆಗಳ ಪೈಕಿ ಎರಡು ಉತ್ತರಗಳನ್ನು ಮತ್ತು